# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:13-05-2015ರ ನಡವಳಿಗಳು

## ವಿಷಯದ ಸಂಖ್ಯೆ : 30 / 2015-16

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ಸಂಖ್ಯೆ:120ರ ವ್ಯಾಪ್ತಿಯಲ್ಲಿ ಬರುವ ಮಾಗಡಿ ರಸ್ತೆ ಕುಷ್ಠರೋಗದ ಆಸ್ಪತ್ರೆ ಮುಂಭಾಗ ಇರುವ ವೃತ್ತಕ್ಕೆ ಕನ್ಯಾ ಸುರಕ್ಷಾ ವೃತ್ತ ಎಂದು ನಾಮಕರಣ ಮಾಡುವ ಬಗ್ಗೆ.

**ಪ್ರಸ್ತಾವನೆ:**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಶ್ರೀ. ಜೈನ್ ಶ್ವೇತಾಂಬರ್ ತೇರಾಪಂಥ್ ಮಹಿಳಾ ಮಂಡಳಿ (ರಿ) ಬೆಂಗಳೂರು ರವರು ದಿನಾಂಕ:12-01-2015 ರಂದು ಪೂಜ್ಯ ಮಹಾಪೌರರಿಗೆ ಮನವಿ ಪತ್ರ ಸಲ್ಲಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ಸಂಖ್ಯೆ: 120ರ ವ್ಯಾಪ್ತಿಯಲ್ಲಿ ಬರುವ ಮಾಗಡಿ ರಸ್ತೆ ಕುಷ್ಠರೋಗದ ಆಸ್ಪತ್ರೆ ಮುಂಭಾಗ ಇರುವ ವೃತ್ತಕ್ಕೆ ಕನ್ಯಾ ಸುರಕ್ಷಾ ವೃತ್ತ ಎಂದು ನಾಮಕರಣ ಮಾಡಲು ಕೋರಿರುತ್ತಾರೆ.

ಈ ಬಗ್ಗೆ ಪರಿಶೀಲಿಸಲಾಗಿ ಸದರಿ ಸಂಘದ ವತಿಯಿಂದ ಬೆಂಗಳೂರು ನಗರದಲ್ಲಿರುವಂತಹ ಹೆಣ್ಣು ಮಕ್ಕಳ ಸಂರಕ್ಷಣೆ ಮತ್ತು ಭ್ರೂಣ ಹತ್ಯೆ ಸಂರಕ್ಷಣೆ ಬಗ್ಗೆ ಜಾಗೃತಿಯನ್ನು ಮೂಡಿಸಬೇಕಾಗಿರುವುದರಿಂದ ಸದರಿ ಹೆಸರನ್ನು ನಾಮಕರಣ ಮಾಡಲು ಪ್ರಸ್ತಾಪಿಸಿರುತ್ತಾರೆ.

ಈ ಸಂಬಂಧ ಸಾರ್ವಜನಿಕ ಪಂಚನಾಮೆ ಜರುಗಿಸಲಾಗಿ ಪ್ರಸ್ತಾವನೆ ಪರವಾಗಿ 7 ಮಂದಿ, ವಿರೋಧವಾಗಿ ಯಾರು ಸಹಿ ಮಾಡದೆ ಇರುವುದು ಕಂಡು ಬಂದಿದೆ.

ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ ಕಾಯ್ದೆ 1976, 293ನೇ ಪ್ರಕರಣದ (1) ನೇ ಉಪ ಪ್ರಕರಣದ ಅನುಸಾರ ಪ್ರತಿಯೊಂದು ಪ್ರಸ್ತಾವನೆಯನ್ನು ಸಂಬಂಧಪಟ್ಟ ಸ್ಥಾಯಿ ಸಮಿತಿಯು 5, 6 ಮತ್ತು 7ನೇ ನಿಯಮಗಳ ಉಪಬಂಧಗಳ ದೃಷ್ಟಿಯಿಂದ ಪರಿಶೀಲಿಸತಕ್ಕದ್ದು ಮತ್ತು ನಗರ ಪಾಲಿಕೆಯು ಗೊತ್ತುವಳಿಯನ್ನು ಅಂಗೀಕರಿಸತಕ್ಕದ್ದು. ಅನಂತರ ಅದನ್ನು, ಕನಿಷ್ಟ ಎರಡು ವೃತ್ತ ಪತ್ರಿಕೆಗಳಲ್ಲಿ ವಿಶೇಷವಾಗಿ, ಕನ್ನಡ ಪತ್ರಿಕೆಗಳಲ್ಲಿ, ಅದರಿಂದ ಬಾಧಿತರಾಗಬಹುದಾದ ವ್ಯಕ್ತಿಗಳಿಗೆ ಮಾಹಿತಿಗಾಗಿ ಮತ್ತು ಅದು ಪ್ರಕಟವಾದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಆಹ್ವಾನಿಸಿ ಪ್ರಕಟಿಸತಕ್ಕದ್ದು. ಮೇಲೆ ಹೇಳಿಕೆ ಅವಧಿಯೊಳಗೆ ಯಾವುದೇ ಆಕ್ಷೇಪಣೆಗಳು ಮತ್ತು ಸಲಹೆಗಳು ಬಂದರೆ, ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಪರಿಶೀಲಿಸುವುದಕ್ಕಾಗಿ ನಗರ ಪಾಲಿಕೆಯ ಮುಂದಿನ ಸಭೆಯಲ್ಲಿ ಅವುಗಳನ್ನು ಮಂಡಿಸತಕ್ಕದ್ದು. ರಾಜ್ಯ ಸರ್ಕಾರದ ಯಾವುದೇ ನಿರ್ದೇಶನಗಳಿದ್ದರೆ ಅವುಗಳಿಗೆ ಒಳಪಟ್ಟು ಗೊತ್ತುವಳಿಯನ್ನು ಅಂಗೀಕರಿಸಿದ ಮೇಲೆ ಅದರಂತೆ ನಗರ ಪಾಲಿಕೆಯ ಬೀದಿಗೆ ನಾಮಕರಣ ಮಾಡುವುದಕ್ಕೆ ಕ್ರಮ ಕೈಗೊಳ್ಳತಕ್ಕದ್ದೆಂದು ಉಲ್ಲೇಖಿಸಲಾಗಿದೆ.

ಆದುದರಿಂದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ: 120ರ ವ್ಯಾಪ್ತಿಯಲ್ಲಿ ಬರುವ ಮಾಗಡಿ ರಸ್ತೆ ಕುಷ್ಠರೋಗದ ಆಸ್ಪತ್ರೆ ಮುಂಭಾಗ ಇರುವ ವೃತ್ತಕ್ಕೆ ಕನ್ಯಾ ಸುರಕ್ಷಾ ವೃತ್ತ ಎಂದು ನಾಮಕರಣ ಮಾಡುವ ಬಗ್ಗೆ ಸೂಕ್ತ ತೀರ್ಮಾನಕ್ಕಾಗಿ ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:20-03-2015ರ ಟಿಪ್ಪಣಿ ಹಾಗೂ ಸದರಿ ಟಿಪ್ಪಣಿಯಲ್ಲಿ ಪ್ರಸ್ತಾಪಿಸಿರುವ ನಾಮಕರಣದ ಪ್ರಸ್ತಾವನೆಯನ್ನು ಒಪ್ಪುವುದೆಂದು ತೀರ್ಮಾನಿಸಿರುವ ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿಯ ದಿನಾಂಕ: 07-04-2015ರ ನಿರ್ಣಯ.

**ತೀರ್ಮಾನ: "ಮುಂದೂಡಿದೆ".**

(ಟಿ.ಎಂ.ವಿಜಯಭಾಸ್ಕರ್)
ಆಡಳಿತಗಾರರು

**ಬೃಹತ್ ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:13-05-2015ರ ನಡವಳಿಗಳು**

**ವಿಷಯದ ಸಂಖ್ಯೆ : 58 / 2015-16**

ವಿಷಯ: Restoration of Road Cut portion by GAIL on ITPL main road from ITPL to BBMP limits via Hopform circle Kadugodi ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಅಲ್ಪಾವಧಿ ಟೆಂಡರ್ ಆಹ್ವಾನಿಸಲು ಅನುಮೋದನೆ ಕೋರಿ.

**ಪ್ರಸ್ತಾವನೆ:**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ITPL ಮುಖ್ಯರಸ್ತೆಯು ಕೆ.ಆರ್.ಪುರಂನಿಂದ ವರ್ತೂರು SH-35 ಮುಖ್ಯರಸ್ತೆಯನ್ನು ಸಂಪರ್ಕಿಸುವ 4 ಪಥದ ಪ್ರಮುಖ ಆರ್ಟಿರಿಯಲ್ ರಸ್ತೆಯಾಗಿದ್ದು, ಪ್ರತಿಷ್ಠಿತ IT ಕಂಪನಿಗಳನ್ನು ಹೊಂದಿರುವ ಪ್ರಮುಖ ರಸ್ತೆಯಾಗಿರುತ್ತದೆ. ಸದರಿ ರಸ್ತೆಯ ITPL ನಿಂದ ಹೋಪಫಾರಂ, ಕಾಡುಗೋಡಿ ಮಾರ್ಗವಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಗಡಿಯವರೆಗೆ ಸುಮಾರು 4.60 ಕಿ.ಮೀ. ಉದ್ದದ ರಸ್ತೆ ಭಾಗಗಳನ್ನು ಗ್ಯಾಸ್ ಪೈಪ್‌ಲೈನ್ ಅಳವಡಿಸುವ ಸಲುವಾಗಿ M/s. GAIL ಸಂಸ್ಥೆಯವರು ರಸ್ತೆಯನ್ನು ಕತ್ತರಿಸಿದ್ದು, ಪೈಪ್‌ಲೈನ್ ಅಳವಡಿಸುವ ಕಾಮಗಾರಿಯ ಬಹುತೇಕ ಪೂರ್ಣಗೊಂಡಿರುತ್ತದೆ. ಸದರಿ ಸಂಸ್ಥೆಯವರಿಗೆ ಪೈಪ್‌ಲೈನ್ ಅಳವಡಿಸುವ ಸಲುವಾಗಿ ಮುಖ್ಯ ಅಭಿಯಂತರರು (ಓ.ಎಫ್.ಸಿ) ರವರು ಆದೇಶ ಸಂಖ್ಯೆ:CE(OFC)/PR/239/2014-15 ದಿನಾಂಕ: 16-12-2014 ರಲ್ಲಿ ಅನುಮೋದನೆ ನೀಡಿದ್ದು, ಸದರಿ ರಸ್ತೆಯನ್ನು ಪುನಶ್ಚೇತನಗೊಳಿಸುವ ಸಲುವಾಗಿ ರೂ.203.00 ಲಕ್ಷ ಮೊತ್ತವನ್ನು Restoration Charges ಆಗಿ ಪಾಲಿಕೆಗೆ ಪಾವತಿಸಿಕೊಂಡಿರುತ್ತಾರೆ. ಈ ಮೇರೆಗೆ P-2348ರ Deposit Contribution ಲೆಕ್ಕಶೀರ್ಷಿಕೆ ಅಡಿಯಲ್ಲಿ ಜಾಬ್ ನಂಬರ್ ಸಹ ನೀಡಲಾಗಿರುತ್ತದೆ.

M/s. GAIL ಸಂಸ್ಥೆಯವರು ಸದರಿ ರಸ್ತೆಯನ್ನು ಕತ್ತರಿಸಿರುವುದರಿಂದ ಸದರಿ ರಸ್ತೆಯು ಅತೀವವಾಗಿ ಹದಗೆಟ್ಟಿರುತ್ತದೆ. ಅತಿದಟ್ಟನೆ ವಾಹನ ಸಂಚಾರ ಇರುವ ಸದರಿ ರಸ್ತೆಯಲ್ಲಿ ವಾಹನ ಸಂಚಾರಕ್ಕೆ ಅಡಚಣೆಯಾಗುತ್ತಿದ್ದು, ಸಂಚಾರವು ಅಸ್ತವ್ಯಸ್ತವಾಗಿರುತ್ತದೆ.

ಸದರಿ ರಸ್ತೆಯ ಕತ್ತರಿಸಿದ ಭಾಗಗಳನ್ನು ಪುನಶ್ಚೇತನಗೊಳಿಸುವ ಸಲುವಾಗಿ ಕಾರ್ಯಪಾಲಕ ಅಭಿಯಂತರರು, ರಮೂಸೌ-ಮಹದೇವಪುರ ವಿಭಾಗರವರು ರೂ.203.00 ಲಕ್ಷ ಮೊತ್ತಕ್ಕೆ ಅಂದಾಜು ಪಟ್ಟಿಯನ್ನು ಸಲ್ಲಿಸಿದ್ದು, ಸದರಿ ಅಂದಾಜು ಪಟ್ಟಿಯ ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ಹಾಗೂ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳಬೇಕಾಗಿರುವುದರಿಂದ 15 ದಿನಗಳ ಅಲ್ಪಾವಧಿ ಟೆಂಡರ್ ಆಹ್ವಾನಿಸಲು ಪ್ರಕಟಣೆಯನ್ನು ಸಿದ್ಧಪಡಿಸಿ ಅನುಮೋದನೆ ಕೋರಿರುತ್ತಾರೆ.

ಈ ಮೇರೆಗೆ ಸದರಿ ಕಾಮಗಾರಿಯ ಅಂದಾಜು ಪಟ್ಟಿ ಮೊತ್ತ ರೂ.203.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಸದರಿ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳಬೇಕಾಗಿರುವುದರಿಂದ 15 ದಿನಗಳ ಅಲ್ಪಾವಧಿ ಟೆಂಡರ್ ಕರೆಯಲು ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:09-05-2015ರ ಟಿಪ್ಪಣಿ.

**ತೀರ್ಮಾನ:** "ಅನುಮೋದಿಸಿದೆ".

(ಟಿ.ಎಂ.ವಿಜಯಭಾಸ್ಕರ್)
ಆಡಳಿತಗಾರರು